# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2019(2415) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22-03-2022 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರ ಸಾಂಸ್ಕೃತಿಕ ಹಾಗೂ ಪ್ರವಾಸೋದ್ಯಮದ ಪ್ರಮುಖ ಕೇಂದ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಮೈಸೂರು ನಗರಕ್ಕೆ ಸ್ವಚ್ಛ ನಗರ ಪ್ರಶಸ್ತಿ ಪಡೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಇ) | ಮೈಸೂರು ನಗರವನ್ನು ಕೇಂದ್ರ ಸರ್ಕಾರದ ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ ಇದುವರೆವಿಗೂ ಸೇರಿಸದೆ ಇರಲು ಕಾರಣವೇನು; | ಸ್ಮಾರ್ಟ್ ಸಿಟಿ ಅಭಿಯಾನವು ಜೂನ್-2015 ರಂದು ಆರಂಭಗೊಂಡಿದ್ದು, ಅಭಿಯಾನದಡಿ ನಗರಗಳ ಆಯ್ಕೆಗೆ ಕೇಂದ್ರ ವಸತಿ ಮತ್ತು ನಗರಾಭಿವೃದ್ಧಿ ಸಚಿವಾಲಯವು ಹಲವಾರು ಮಾನದಂಡಗಳನ್ನು ನಿಗಧಿಪಡಿಸಿರುತ್ತದೆ. JNNURM ಯೋಜನೆಯಲ್ಲಿ ಕೈಗೊಂಡ ಕಾಮಗಾರಿಗಳ ಪೂರ್ಣಗೊಳಿಸುವಿಕೆ, ನಗರದ ಮಹಾನಗರ ಪಾಲಿಕೆಯ ಆಯವ್ಯಯದ ಪರಿಸ್ಥಿತಿ, ಆಸ್ತಿ ತೆರಿಗೆ ಶೇಕಡಾ ವಸೂಲಾತಿ ಹೀಗೆ ಹಲವಾರು ಮಾನದಂಡಗಳಿಗೆ ಅಂಕಗಳನ್ನು ಸ್ಮಾರ್ಟ್ ಸಿಟಿ ಅಭಿಯಾನದ ಮಾರ್ಗಸೂಚಿಯು ನಿಗದಿಪಡಿಸಿರುತ್ತದೆ. ಸದರಿ ಮಾನದಂಡಗಳನ್ವಯ ಮೈಸೂರು ನಗರದಲ್ಲಿ JNNURM ಅಡಿಯಲ್ಲಿ 2015ನೇ ಸಾಲಿನಲ್ಲಿ ಯಾವುದೇ ಕಾಮಗಾರಿಗಳನ್ನು ಪೂರ್ಣಗೊಳಿಸದೇ ಇರುವುದರಿಂದ ನಗರವು ಸ್ಮಾರ್ಟ್ ಸಿಟಿ ಯೋಜನೆಯಡಿ ಆಯ್ಕೆಗೊಳ್ಳಲು ಬೇಕಾದ ಅಂಕಗಳನ್ನು ಗಳಿಸಲಾಗದಿದ್ದರಿಂದ, ಮೈಸೂರು ನಗರವನ್ನು ಸ್ಮಾರ್ಟ್ ಸಿಟಿ ಅಭಿಯಾನದಡಿಯಲ್ಲಿ ಪರಿಗಣಿಸಲಾಗಿರುವುದಿಲ್ಲ. |
| ಈ) | ಯಾವ ಕಾಲಮಿತಿಯಲ್ಲಿ ಸ್ಮಾರ್ಟ್‌ಸಿಟಿ ಯೋಜನೆಗೆ ಸೇರ್ಪಡೆಗೊಳಿಸಲಾಗುವುದು? | ಸ್ಮಾರ್ಟ್ ಸಿಟಿ ಅಭಿಯಾನದಡಿ ರಾಜ್ಯದಿಂದ 7 ನಗರಗಳಾದ ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳು ಆಯ್ಕೆಯಾಗಿರುತ್ತವೆ. ರಾಜ್ಯದ ಉಳಿದ 4 ಮಹಾನಗರ ಪಾಲಿಕೆಗಳಾದ ಮೈಸೂರು, ವಿಜಯಪುರ, ಕಲಬುರಗಿ ಮತ್ತು ಬಳ್ಳಾರಿ ನಗರಗಳನ್ನು ಸ್ಮಾರ್ಟ್ ಸಿಟಿ ಅಭಿಯಾನದಡಿ ಪರಿಗಣಿಸಲು ಕೇಂದ್ರ ವಸತಿ ಮತ್ತು ನಗರಾಭಿವೃದ್ಧಿ ಸಚಿವಾಲಯಕ್ಕೆ ಪ್ರಸ್ತಾವನೆಯನ್ನು ದಿನಾಂಕ:06.09.2021 ರಂದು ಸಲ್ಲಿಸಲಾಗಿತ್ತು. ಈ ಬಗ್ಗೆ ಕೇಂದ್ರ ವಸತಿ ಮತ್ತು ನಗರಾಭಿವೃದ್ಧಿ ಸಚಿವರು ದಿನಾಂಕ:08.11.2021 ರ ಪತ್ರದಲ್ಲಿ ಸ್ಮಾರ್ಟ್ ಸಿಟಿ ಅಭಿಯಾನದಡಿ ಪ್ರಸ್ತುತದಲ್ಲಿ ಹೆಚ್ಚುವರಿ ನಗರಗಳ ಸೇರ್ಪಡೆಗೆ ಅವಕಾಶವಿರುವುದಿಲ್ಲವೆಂದು ಸ್ಪಷ್ಟೀಕರಿಸಿರುತ್ತಾರೆ. |

ಸಂಖ್ಯೆ:ನಅಇ 78 ಸಿಎಸ್‌ಎಸ್ 2022

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು
(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು